ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**ಬುಧವಾರ, ದಿನಾಂಕ: ೦೮ನೇ ಫೆಬ್ರವರಿ, ೨೦೧೭**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು

೫. ಕಾರ್ಮಿಕ ಸಚಿವರು

೬. ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

---

**ಕೆರೆಗಳ ಹೂಳೆತ್ತಲು ನಿಗದಿಪಡಿಸಿರುವ ಅನುದಾನ ಕುರಿತು.**

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೬ (೧೫೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೆರೆಗಳ ಹೂಳೆತ್ತಲು ಕಳೆದ ೩ ವರ್ಷಗಳಲ್ಲಿ ನಿಗದಿಪಡಿಸಲಾದ ಹಣ ಎಷ್ಟು ; ಬಿಡುಗಡೆ ಮಾಡಲಾದ, ಖರ್ಚಾದ ಹಾಗೂ ಬಾಕಿ ಉಳಿದಿರುವ ಹಣ ಎಷ್ಟು ;

(ಆ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು ಕಾಡುಕೊತ್ತನಹಳ್ಳಿಯ ಕೆರೆ ಹೂಳೆತ್ತಲು ಮಂಜೂರಾದ ಹಣ ಎಷ್ಟು ;

(ಇ) ಟೆಂಡರುದಾರರಿಗೆ ನಿಗದಿಪಡಿಸಿದ ಹಣ ಎಷ್ಟು ; ಬಿಡುಗಡೆಯಾದ ಹಣ ಎಷ್ಟು ;

(ಈ) ಈ ಕೆರೆಯ ಕಾಮಗಾರಿಯನ್ನು ಮಳೆಗಾಲದಲ್ಲಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಕೆರೆಯ ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ ; ಮತ್ತು ಮುಕ್ತಾಯಗೊಂಡಿದ್ದು ಯಾವಾಗ ಹಾಗೂ ಹಣ ಬಿಡುಗಡೆಯಾದ ದಿನಾಂಕ ಯಾವುದು ? (ವಿವರ ನೀಡುವುದು)

## ತಿರುಮಲದಲ್ಲಿ ಯಾತ್ರಿಗಳಿಗೆ ಭವನ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)–**

೧೭ (೨೦೯) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಿರುಪತಿ ತಿರುಮಲದಲ್ಲಿ ಕರ್ನಾಟಕದ ಯಾತ್ರಿಗಳಿಗಾಗಿ ಭವನ ನಿರ್ಮಾಣ ಮಾಡುವ ಸಂಬಂಧ ಸರ್ಕಾರದ ಅಧೀನದಲ್ಲಿ ಎಷ್ಟು ಜಮೀನು ಇದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಜಮೀನಿನಲ್ಲಿ ಯಾತ್ರಿಗಳಿಗೆ ಉತ್ತಮವಾದ ಛತ್ರ/ಭವನ/ಯಾತ್ರಿ ನಿವಾಸ್‌ಗಳನ್ನು ನಿರ್ಮಾಣ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಇ) ಯಾವ ಕಾಲಮಿತಿಯೊಳಗೆ ಹೆಚ್ಚಿನ ಛತ್ರ/ಭವನ/ಯಾತ್ರಿ ನಿವಾಸ್‌ಗಳನ್ನು ನಿರ್ಮಾಣ ಮಾಡಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಈ) ಹಾಲಿ ಇರುವ ಕರ್ನಾಟಕ ಭವನದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ಅವರು ಪಡೆಯುತ್ತಿರುವ ವೇತನವೆಷ್ಟು ; (ಸಿಬ್ಬಂದಿ ಹೆಸರು, ಹುದ್ದೆಯ ಪದನಾಮ, ವಿದ್ಯಾರ್ಹತೆ, ವೇತನ ಶ್ರೇಣಿ) ಇತರೆಗಳೊಂದಿಗೆ ಮಾಹಿತಿ ನೀಡುವುದು

## ಪರವಾನಗೆ ಪಡೆದ ಭೂಮಾಪಕರುಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೮ (೧೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಪರವಾನಗೆ ಪಡೆದು ಕೆಲಸ ನಿರ್ವಹಿಸುತ್ತಿರುವ ಭೂಮಾಪಕರುಗಳೆಷ್ಟು ; (ತಾಲ್ಲೂಕುವಾರು ಹೆಸರುಗಳ ಸಹಿತ ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಭೂಮಾಪಕರುಗಳು ಸರಿಯಾಗಿ ಕರ್ತವ್ಯ ನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಭೂಮಾಪಕರುಗಳ ಪರವಾನಿಗಿ ರದ್ದು ಮಾಡದಿರಲು ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಇದರಿಂದಾಗಿ ರೈತರುಗಳು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದು, ಇದರ ನಿವಾರಣೆಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ವಿಶ್ವ ಬ್ಯಾಂಕ್ ನೆರವಿನ ಅಣೆಕಟ್ಟುಗಳ ಪುನಃಶ್ಚೇತನ (ಡ್ರಿಪ್) ಯೋಜನೆಯು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳದೆ ಇರುವ ವಿಚಾರ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೯ (೧೪೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಶ್ವಬ್ಯಾಂಕ್ ನೆರವಿನ ಅಣೆಕಟ್ಟುಗಳ (ಆಲಮಟ್ಟಿ, ಕೃಷ್ಣರಾಜಸಾಗರ ಹಾಗೂ ಕೃಷ್ಣಾ–ಕಾವೇರಿ ಕಣಿವೆಗಳ ಪ್ರಮುಖ ಅಣೆಕಟ್ಟುಗಳ) ಪುನಃಶ್ಚೇತನ (ಡ್ರಿಪ್) ಯೋಜನೆಯು ನಿಧಾನಗತಿಗೆ ತಿರುಗಿದ್ದು, ಇದು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಮಹತ್ವದ ಯೋಜನೆಗಳು ಕುಂಟುತ್ತಾ ಸಾಗಲು ಕಾರಣಗಳೇನು ; (ವಿವರ ನೀಡುವುದು)

(ಇ) ಆರಂಭದಿಂದ ಇಲ್ಲಿಯವರೆಗಿನ ಈ ಯೋಜನೆಯ ಪ್ರಗತಿಯನ್ನು ವಿವರವಾಗಿ ತಿಳಿಸುವುದು ;

(ಈ) ಬೆಳಗಾವಿ ಜಿಲ್ಲೆಯಲ್ಲಿನ ಯಾವ ಯಾವ ಕಾಮಗಾರಿಗಳು ಈ ಯೋಜನೆಯಡಿ ಸೇರಿಕೊಂಡಿವೆ ; ಇವುಗಳಿಗೆ ನಿಗದಿಪಡಿಸಿದ್ದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ;

(ಉ) ಡ್ರಿಪ್ ಯೋಜನೆಯ ಕಾಮಗಾರಿಗಳು ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳುವುವು ; ಇವುಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕಪ್ಪತ್ತಗುಡ್ಡ ಸಂರಕ್ಷಿತ ಅರಣ್ಯ ಪ್ರದೇಶ ಮತ್ತು ಪಾರಂಪರಿಕ ಔಷಧ ಗಿಡಮೂಲಿಕೆಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು)–**

೨೦ (೧೧೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಜಿಲ್ಲೆಯಲ್ಲಿರುವ ಕಪ್ಪತ್ತಗುಡ್ಡ ಸಂರಕ್ಷಿತ ಅರಣ್ಯ ಪ್ರದೇಶದ ವಿಸ್ತೀರ್ಣವೆಷ್ಟು ;

(ಆ) ಈ ಅರಣ್ಯ ಪ್ರದೇಶದಲ್ಲಿ ಯಾವುದಾದರೂ ಪ್ರದೇಶವನ್ನು ಯಾರಾದರೂ ಒತ್ತುವರಿ ಅಥವಾ ಅತಿಕ್ರಮಣ ಮಾಡಿಕೊಂಡಿದ್ದಾರೆಯೇ ;

(ಇ) ಮಾಡಿಕೊಂಡಿದ್ದಲ್ಲಿ, ಯಾರಿಂದ ಒತ್ತುವರಿ ಅಥವಾ ಅತಿಕ್ರಮಣವಾಗಿದೆ ; ಅದನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಕಪ್ಪತ್ತಗುಡ್ಡ ಪ್ರದೇಶದಲ್ಲಿ ಲಭ್ಯವಾಗುವ ಪಾರಂಪರಿಕ ಔಷಧಿ ಗಿಡಮೂಲಿಕೆಗಳು ಯಾವುವು ; ಎಷ್ಟು ವಿಸ್ತೀರ್ಣ ಪ್ರದೇಶದಲ್ಲಿ, ಎಷ್ಟು ಪ್ರಮಾಣದ ಗಿಡಮೂಲಿಕೆಗಳನ್ನು ಬೆಳೆಸಲಾಗಿದೆ ; (ವಿವರ ನೀಡುವುದು)

(ಉ) ಅವುಗಳ ಸಂರಕ್ಷಣೆ, ಪಾಲನೆ ಮತ್ತು ಪೋಷಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಜವಳಿ ಪಾರ್ಕ್ ಸ್ಥಾಪಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)–**

೨೧ (೧೨೯) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದೆ ; ಯಾವ ಯಾವ ಜಿಲ್ಲೆಗಳಲ್ಲಿ ಸ್ಥಾಪಿಸಲಾಗಿದೆ ; (ಮಾಹಿತಿ ನೀಡುವುದು)

(ಆ) ಜವಳಿ ಪಾರ್ಕ್ ಸ್ಥಾಪಿಸಲು ಕೇಂದ್ರ ಸರ್ಕಾರದಿಂದ ನೆರವು ನೀಡಲಾಗುತ್ತಿದೆಯೇ ; ಈಗಾಗಲೇ ಸರ್ಕಾರದ ಮುಂದೆ ಇರುವ ಪ್ರಸ್ತಾವನೆಗಳು ಯಾವುವು ; (ಬೇಡಿಕೆ ಬಗ್ಗೆ ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಉದ್ಯೋಗಗಳನ್ನು ಸೃಷ್ಟಿಸುವ ಯೋಜನೆ ಸರ್ಕಾರದ ಮುಂದಿದೆ ; ಇದರಲ್ಲಿ ಕನ್ನಡಿಗರಿಗೆ ಪ್ರತ್ಯೇಕವಾಗಿ ಇರುವ ಶೇಕಡವಾರು ಪ್ರಮಾಣವೆಷ್ಟು ;

(ಈ) ಬೇಡಿಕೆಗೆ ತಕ್ಕಂತೆ ಯಾವ ಕಾಲಮಿತಿಯಲ್ಲಿ ಈ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗುವುದು ?

## ಮಂಡ್ಯ ಜಿಲ್ಲೆಯ ಏತ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)–**

೨೨ (೧೩೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಮಂಜೂರಾಗಿರುವ ಏತ ನೀರಾವರಿ ಯೋಜನೆಗಳ ಸಂಖ್ಯೆ ಎಷ್ಟು ;

(ಆ) ಈ ಬಾಬ್ತು ಎಷ್ಟು ಕಾರ್ಯನಿರ್ವಹಿಸುತ್ತಿವೆ ; ವಿಶೇಷವಾಗಿ ಮದ್ದೂರು ತಾಲ್ಲೂಕಿನಲ್ಲಿ ಮಂಜೂರಾಗಿ ಕಾಮಗಾರಿ ಮುಗಿದಿರುವ ಏತ ನೀರಾವರಿಗಳೆಷ್ಟು ; ಅಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಇ) ಇವುಗಳ ಕಾಯಕಲ್ಪಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಾಡುಪ್ರಾಣಿಗಳ ಹಾವಳಿ ತಡೆಗೆ ಪರಿಹಾರೋಪಾಯದ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನ ಸಭೆಯಿಂದ ಚುನಾಯಿತರಾದವರು)–**

೨೩ (೯೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ರಿಂದ ಈವರೆಗೆ ವನ್ಯಜೀವಿಗಳು ನಾಡಿಗೆ ಬರದಂತೆ ತಡೆಯಲು ಕಾಡಿನಂಚಿನಲ್ಲಿ ಎಲ್ಲೆಲ್ಲಿ ಮತ್ತು ಎಷ್ಟು ಕಿ.ಮೀ. ಕಂದಕ ನಿರ್ಮಾಣ ಮಾಡಲಾಗಿದೆ ; ಇದಕ್ಕಾಗಿ ಖರ್ಚು ಮಾಡಲಾದ ಅನುದಾನವೆಷ್ಟು ;

(ಆ) ವನ್ಯ ಪ್ರಾಣಿಗಳ ಸಂತಾನಾಭಿವೃದ್ಧಿ ಅತಿಯಾಗದಂತೆ ನೈಸರ್ಗಿಕ ನಿಯಂತ್ರಣಾ ವ್ಯವಸ್ಥೆ ಕಾಪಾಡುವ ಬಗ್ಗೆ ಸರ್ಕಾರದಿಂದ ಯಾವ ಕ್ರಮವನ್ನು ತೆಗೆದುಕೊಳ್ಳಲಾಗಿದೆ ; ತೆಗೆದುಕೊಳ್ಳದಿದ್ದಲ್ಲಿ, ಸರ್ಕಾರದ ನಿರ್ಧಾರವೇನು ; (ವಿವರ ನೀಡುವುದು)

(ಇ) ಮಂಗಗಳ ಹಾವಳಿ ತಡೆಯಲು ತೋಟದಿಂದ ಸುಮಾರು ೧೦೦ ಮೀ. ವರೆಗೆ ಮರದ ಟೊಂಗೆ ಕಡಿಯಲು ರೈತರಿಗೆ ಅನುಮತಿ ಕೊಡಲಾಗಿದೆಯೇ ; ಇಲ್ಲದಿದ್ದರೆ, ರೈತರ ಹಿತದೃಷ್ಟಿಯಿಂದ ಅನುಮತಿ ನೀಡಬಹುದೆ ;

(ಈ) ಕೆಲವೊಂದು ಪ್ರದೇಶ ಮತ್ತು ಜಿಲ್ಲೆಗಳಲ್ಲಿ ಬಗೆ ಬಗೆಯ ವನ್ಯಜೀವಿಗಳಿಂದ ತೊಂದರೆಯಿದ್ದು, ಏಕಜಾತಿ ನೆಡುತೋಪಿನ ಬದಲು ವನ್ಯ ಪ್ರಾಣಿಗಳಿಗೆ ಆಹಾರ ಒದಗಿಸುವ ಫಲವೃಕ್ಷ ಬೆಳೆಸಲು ಕ್ರಮ ಕೈಗೊಳ್ಳಲಾಗುತ್ತದೆಯೇ ? (ಪೂರ್ಣ ವಿವರ ನೀಡುವುದು)

## ರಾಯಚೂರು ತಾಲೂಕಿನಲ್ಲಿರುವ ೨೨ ಕೆರೆಗಳ ಅಭಿವೃದ್ಧಿ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)–**

೨೪ (೧೬೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಭದ್ರಾ ರಿಸರ್ವಾಯರ್‌ನಲ್ಲಿ ೩೩ TMC ಹೂಳು ತುಂಬಿರುವುದರಿಂದ ನೀರಿನ ಸಾಮರ್ಥ್ಯ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ೩೩ TMC ಸಾಮರ್ಥ್ಯವನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ನಿರ್ಮಾಣವಾಗಿರುವ NRBC ಸ್ಕೀಂ B ನಲ್ಲಿ ೯೫ Km ನಿಂದ ೧೬೮ Km ವರೆಗೂ ಕಾಲುವೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇದಕ್ಕೆ ತಗಲಿರುವ ವೆಚ್ಚ ಎಷ್ಟು ; ನೂತನವಾಗಿ ನಿರ್ಮಾಣವಾಗಿರುವ ಕಾಲುವೆಗೆ ಉಪಕಾಲುವೆಗಳ ನಿರ್ಮಾಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇವುಗಳನ್ನು ಪೂರ್ಣಗೊಳಿಸಲು ನಿಗದಿಯಾಗಿರುವ ಕಾಲಾವಧಿ ಎಷ್ಟು ;

(ಇ) ರಾಯಚೂರು ತಾಲ್ಲೂಕಿನಲ್ಲಿ NRBC ಕಾಲುವೆಗಳ ಕೆಳಗೆ ಬರುವ ೨೨ ಕೆರೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) NRBC ಗೆ ಸೇರಿರುವ ೯ಎ ಕ್ಯಾನಲ್ ವಡವಟ್ಟೆ ಬ್ಯಾಂಚ ಕಾಲುವೆ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮೈಸೂರು ಮೃಗಾಲಯದಲ್ಲಿ ಹಕ್ಕಿಜ್ವರದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೫ (೧೭೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮೃಗಾಲಯದಲ್ಲಿ ಹಕ್ಕಿಜ್ವರ ಕಾಣಿಸಿಕೊಳ್ಳುವ ಸಂಭವವಿರುವ ಬಗ್ಗೆ ಕೇಂದ್ರ ಅರಣ್ಯ ಇಲಾಖೆಯಿಂದ ಯಾವಾಗ ಮಾಹಿತಿ ಬಂದಿರುತ್ತದೆ ; ಈ ಬಗ್ಗೆ ಯಾವ ಯಾವ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಯಿತು ; ಹಕ್ಕಿಜ್ವರವನ್ನು ಯಾವಾಗ ಪತ್ತೆ ಮಾಡಲಾಯಿತು ; ಹಕ್ಕಿಜ್ವರ ಪ್ರತಿಬಂಧಕದ ವಿಚಾರದಲ್ಲಿ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳದೇ ಏಕಾಏಕಿ ಯಾವಾಗ ಮೃಗಾಲಯವನ್ನು ಮುಚ್ಚಲಾಯಿತು ; ಮೃಗಾಲಯವನ್ನು ಮುಚ್ಚುವ ನಿರ್ಧಾರ ಕೈಗೊಂಡವರು ಯಾರು ;

(ಆ) ಮೃಗಾಲಯದ ನಿರ್ದೇಶಕರ ಹುದ್ದೆ ಯಾವ ಶ್ರೇಣಿಯದು ; ಈಗ ಸೇವೆ ಸಲ್ಲಿಸುತ್ತಿರುವ ಅಧಿಕಾರಿ ಯಾವ ಶ್ರೇಣಿಗೆ ಸೇರಿದವರು ; ಮೃಗಾಲಯದ ನಿರ್ದೇಶಕರ ಹುದ್ದೆಯನ್ನು ಇವರಿಗೋಸ್ಕರ ಕೆಳಹಂತದ ಶ್ರೇಣಿಗೆ ಇಳಿಸಲಾಗಿದೆಯೇ ; ಮೃಗಾಲಯದ ನಿರ್ದೇಶಕರ ಹುದ್ದೆಗೆ ನೇಮಕ ಮಾಡಲು ಸೂಕ್ತ ಶ್ರೇಣಿಯ ಸೂಕ್ತ ಅಧಿಕಾರಿಯ ಕೊರತೆ ಇದೆಯೇ ;

(ಇ) ಈಗಿರುವ ಮೃಗಾಲಯದ ನಿರ್ದೇಶಕರಿಗೂ, ಅಲ್ಲಿನ ಸಿಬ್ಬಂದಿಗೂ ಹೊಂದಾಣಿಕೆಯ ಕೊರತೆಯಿದ್ದು, ವಿನಾಕಾರಣ ಕೆಲವು ಸಿಬ್ಬಂದಿಯನ್ನು ಸಸ್ಪೆಂಡ್ ಮಾಡಿ, ಅವರು ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಧರಣಿ ನಡೆಸಿದ್ದು, ಅವರನ್ನು ಪುನಃ ನೇಮಕ ಮಾಡಿಕೊಳ್ಳುವುದಾಗಿ ಮೃಗಾಲಯದ ಅಧ್ಯಕ್ಷರು ಭರವಸೆ ನೀಡಿದ್ದು, ಅದು ಕಾರ್ಯರೂಪಕ್ಕೆ ಬರದೇ ಇರಲು ಕಾರಣಗಳೇನು ;

(ಈ) ಮೃಗಾಲಯದ ಕೆಲವು ನೌಕರರಿಗೆ ನೋಟೀಸ್ ನೀಡಿದ ಅಧಿಕಾರಿ ಯಾರು ; ಅವರಿಗೆ ಈ ಅಧಿಕಾರ ಇದೆಯೇ ; ನೋಟೀಸ್ ನೀಡಿದ ಅಧಿಕಾರಿ ಬೇರೆಯಾಗಿದ್ದರೂ ಕೂಡಾ, ಸಕ್ಷಮ ಪ್ರಾಧಿಕಾರಿಯಾದ ಮೃಗಾಲಯದ ನಿರ್ದೇಶಕರು ಅವರಿಂದ ಸೂಕ್ತ ವಿವರಣೆ ಪಡೆಯದೇ ಸಸ್ಪೆಂಡ್ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಬೀದರ ಜಿಲ್ಲೆಯಲ್ಲಿ ಮಳೆಯಿಂದ ಒಡೆದ ಕೆರೆಗಳ ಬಗ್ಗೆ

**ಶ್ರೀ ವಿಜಯ್‌ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೬ (೧೩೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ೨೦೧೬ನೇ ಸೆಪ್ಟೆಂಬರ್‌ನಲ್ಲಿ ಮಳೆಯಿಂದ ಒಡೆದು ಹೋದ ಕೆರೆಗಳ ಸಂಖ್ಯೆ ಎಷ್ಟು ; ಇದರಿಂದ ಉಂಟಾದ ಹಾನಿಯ ಪ್ರಮಾಣ ಎಷ್ಟು ; (ವಿವರ ನೀಡುವುದು)

(ಆ) ಕೆರೆ ಒಡೆದು ಬೆಳೆ ಮತ್ತು ಹೊಲದಲ್ಲಿನ ಮಣ್ಣು ಕೊಚ್ಚಿಕೊಂಡು ಹೋದ ಹಿನ್ನಲೆಯಲ್ಲಿ ರೈತರಿಗೆ ಎಷ್ಟು ಪರಿಹಾರ ನೀಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಹಾವೇರಿ ಜಿಲ್ಲೆಯ ಕೆರೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು)–**

೨೭ (೧೦೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆರೆ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಹಾವೇರಿ ಜಿಲ್ಲೆಯಲ್ಲಿ ಎಷ್ಟು ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ ;

(ಆ) ಅಭಿವೃದ್ಧಿಪಡಿಸಿದ ಕೆರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಈ ಅನುದಾನ ಸಮರ್ಪಕವಾಗಿ ಬಳಕೆಯಾಗಿದೆಯೇ ? (ತಾಲ್ಲೂಕುವಾರು ವಿವರ ನೀಡುವುದು)

## ಪುನರ್ ವಸತಿ ಕೇಂದ್ರಗಳನ್ನು ಗ್ರಾಮ ಪಂಚಾಯತ್‌ಗಳಿಗೆ ಹಸ್ತಾಂತರಿಸುವ ಬಗ್ಗೆ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)–**

೨೮ (೨೨೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ಮುಳುಗಡೆಯಾದ ಗ್ರಾಮಗಳ ಸಂತ್ರಸ್ಥರಿಗೆ ಪುನರ್ ವಸತಿ ಕೇಂದ್ರಗಳನ್ನು ನಿರ್ಮಿಸಿದ್ದು, ಈ ಪುನರ್ ವಸತಿ ಕೇಂದ್ರಗಳನ್ನು ಅಭಿವೃದ್ಧಿಪಡಿಸದೆ ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರ ಮಾಡುತ್ತಿರುವುದಕ್ಕೆ ಸಂತ್ರಸ್ಥರ ವಿರೋಧವಿದ್ದರೂ ಕೂಡಾ ಹಸ್ತಾಂತರ ಪ್ರಕ್ರಿಯೆ ಮುಂದುವರೆದಿದೆ ಎಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಎಷ್ಟು ಪುನರ್ ವಸತಿ ಕೇಂದ್ರಗಳನ್ನು ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಲಾಗಿದೆ ಹಾಗೂ ಇವುಗಳ ಅಭಿವೃದ್ಧಿಗಾಗಿ ಗ್ರಾಮ ಪಂಚಾಯಿತಿಗಳಿಗೆ ವಿಶೇಷ ಅನುದಾನವನ್ನು ನೀಡುವ ವಿಚಾರ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವಾಗಿನಿಂದ ಮಂಜೂರು ಮಾಡಲಾಗುವುದು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಭಾರಿ ಮತ್ತು ಮಧ್ಯಮ ನೀರಾವರಿಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೨೯ (೧೦೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪, ೨೦೧೪–೧೫, ೨೦೧೫–೧೬, ೨೦೧೬–೧೭ನೇ ಸಾಲುಗಳಲ್ಲಿ ಭಾರಿ ಮತ್ತು ಮಧ್ಯಮ ನೀರಾವರಿಗೆ ಆಯವ್ಯಯದಲ್ಲಿ ಘೋಷಣೆ ಮಾಡಿದ ಹಣದ ಮೊತ್ತ ಎಷ್ಟು ; ಬಿಡುಗಡೆ ಮಾಡಿದ ಮೊತ್ತ ಎಷ್ಟು ; ವಾಸ್ತವಿಕವಾಗಿ ಖರ್ಚು ಮಾಡಿರುವ ಮೊತ್ತ ಎಷ್ಟು ; (ವರ್ಷವಾರು ವಿವರವನ್ನು ನೀಡುವುದು)

## ಜಮೀನು ಖರೀದಿಯಿಂದ ಸರ್ಕಾರದ ಬೊಕ್ಕಸಕ್ಕೆ ಸಂಗ್ರಹವಾದ ಹಣದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೩೦ (೧೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಜಮೀನು ಖರೀದಿ ಹಾಗೂ ಇನ್ನಿತರ ಮೂಲಗಳಿಂದ ಮುದ್ರಾಂಕ ಶುಲ್ಕವಾಗಿ ಪ್ರತಿ ವರ್ಷ ಎಷ್ಟು ಮೊತ್ತ ಸಂಗ್ರಹವಾಗುತ್ತಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಸಂಗ್ರಹವಾದ ಈ ನಿಧಿಯನ್ನು ಸರ್ಕಾರವು ಯಾವ ಯಾವ ಯೋಜನೆಗಳಿಗೆ ಬಳಸಿಕೊಳ್ಳಲಾಗುತ್ತದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸ್ಮಶಾನ ಅಭಿವೃದ್ಧಿಗೆ ಎಷ್ಟು ಮೊತ್ತವನ್ನು ಮೀಸಲಿರಿಸಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 957 – ಪಿ8 – 1500 ಪ್ರತಿಗಳು